**Akashvani : Bangalore**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**02.08.2024 / 14.30 hrs**

<u>ಮುಖ್ಯಾಂಶಗಳು</u>

**೧. ಬಿಜೆಪಿ-ಜೆಡಿಎಸ್ ಪಕ್ಷಗಳ ಉದ್ದೇಶಿತ ಬೆಂಗಳೂರು-ಮೈಸೂರು ಪಾದಯಾತ್ರೆಗೆ ಸರ್ಕಾರದ ಅನುಮತಿ**

**೨. ದಕ್ಷಿಣ ಕನ್ನಡ ಜಿಲ್ಲೆಯ ಮಳೆ ಹಾನಿ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಭೇಟಿ, ಪರಿಶೀಲನೆ**

**೩. ಸರ್ಕಾರದ ಯೋಜನೆಗಳ ಸದುಪಯೋಗ ಪಡಿಸಿಕೊಳ್ಳುವಂತೆ ರೈತರಿಗೆ ಕೃಷಿ ಸಚಿವ ಚಲುವರಾಯಸ್ವಾಮಿ ಕರೆ**

**೪. ಪ್ಯಾರಿಸ್ ಒಲಿಂಪಿಕ್ಸ್; ಎರಡು ಕಂಚಿನ ಪದಕ ವಿಜೇತೆ ಮನು ಬಾಕರ್ ಇಂದು ೨೫ ಮೀಟರ್ ಶೂಟಿಂಗ್‌ನಲ್ಲಿ ಸ್ಪರ್ಧೆ**

**<><*<><>*><>**

ಬಿಜೆಪಿ-ಜೆಡಿಎಸ್ ಪಕ್ಷಗಳು ನಡೆಸಲು ಉದ್ದೇಶಿಸಿರುವ ಬೆಂಗಳೂರು-ಮೈಸೂರು ಪಾದಯಾತ್ರೆಗೆ ಅನುಮತಿ ನೀಡಲು ನಿರ್ಧರಿಸಲಾಗಿದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ತಮ್ಮ ನಿವಾಸದ ಬಳಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಶಾಂತಿಯುತ ಪಾದಯಾತ್ರೆ ನಡೆಸಲಿದ್ದೇವೆ ಎಂದು ಭರವಸೆ ನೀಡಿದ್ದಾರೆ. ಹಾಗಾಗಿ ಪಾದಯಾತ್ರೆಗೆ ಅನುಮತಿಗೆ ನಿರ್ಧರಿಸಲಾಗಿದೆ ಎಂದು ಸ್ಪಷ್ಟಪಡಿಸಿದರು. ರಾಜ್ಯಪಾಲರ ಶೋಕಾಸ್ ನೋಟೀಸ್ ವಿಷಯ ಕುರಿತು ಪ್ರತಿಕ್ರಿಯಿಸಿ, ನಿನ್ನೆ ರಾತ್ರಿ ಸಂಪುಟ ನಿರ್ಣಯ ಕಳಿಸಲು ತೀರ್ಮಾನಿಸಲಾಗಿದೆ ಎಂದರು. ರಾಜ್ಯಪಾಲರು ಯಾವುದೇ ನಿರ್ಧಾರ ಕೈಗೊಳ್ಳಲಿ. ಅದನ್ನು ಎದುರಿಸಲು ನಾವು ಸಿದ್ಧವಾಗಿದ್ದೇವೆ. ಕಾನೂನು ಹೋರಾಟ ನಡೆಸಲು ನ್ಯಾಯಾಂಗದ ಮೊರೆ ಹೋಗಬೇಕಾಗುತ್ತದೆ ಎಂದು ಹೇಳಿದರು. ಸುಪ್ರೀಂಕೋರ್ಟ್ ಒಳ ಮೀಸಲಾತಿ ಕುರಿತ ಗೊಂದಲ ಬಗೆಹರಿಸಿದೆ. ಸುಪ್ರೀಂಕೋರ್ಟ್ ತೀರ್ಪನ್ನು ಸ್ವಾಗತಿಸುತ್ತೇವೆ, ಸದಾಶಿವ ಆಯೋಗದ ವರದಿ ಜಾರಿ ಬಗ್ಗೆ ಚರ್ಚಿಸುತ್ತೇವೆ. ಒಳ ಮೀಸಲಾತಿ ನೀಡಲು ಪ್ರಯತ್ನಿಸ್ತೇವೆ ಎಂದು ಭರವಸೆ ನೀಡಿದರು.

**<><*<><>*><>**

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಭಾರೀ ಮಳೆಯ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳಿಗೆ ಇಂದೂ ಸಹ ರಜೆ ಘೋಷಿಸಲಾಗಿದೆ. ಜಿಲ್ಲಾ ಉಸ್ತುವಾರಿಯೂ ಆಗಿರುವ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಜಿಲ್ಲೆಯ ನೆರೆ ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯನ್ನು ಪರಿಶೀಲಿಸಿದರು. ಮಂಗಳೂರಿನ ಕೆತ್ತಿಕಲ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಗುಡ್ಡ ಕುಸಿತ ಆತಂಕವಿರುವ ಸ್ಥಳಕ್ಕೆ ತೆರಳಿದ ಸಚಿವರು, ಪರಿಸ್ಥಿತಿಯನ್ನು ಅವಲೋಕಿಸಿ, ಈ ಪ್ರದೇಶದಲ್ಲಿ ಭೂಮಾಫಿಯಾದಿಂದಾಗಿ ಸಮಸ್ಯೆ ಎದುರಾಗುತ್ತಿರುವ ಬಗ್ಗೆ ದೂರುಗಳು ಕೇಳು ಬರುತ್ತಿದ್ದು, ಈ ಬಗ್ಗೆ ಉನ್ನತ ಮಟ್ಟದ ತನಿಖೆ ನಡೆಸಲಾಗುವುದು ಎಂದು ಸಚಿವರು ಹೇಳಿದರು. ಜಿಲ್ಲಾಧಿಕಾರಿ ಮುಲ್ಲೈಮುಗಿಲನ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಆನಂದ್ ಮತ್ತಿತರ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**<><*<><>*><>**

ಉತ್ತರಕನ್ನಡ ಜಿಲ್ಲೆಯಲ್ಲಿ ಇಂದು ಭಾರಿ ಮಳೆಯಾಗುವ ಕುರಿತು ಹವಾಮಾನ ಇಲಾಖೆ 'ರೆಡ್ ಅಲರ್ಟ್' ಘೋಷಿಸಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಸುರಕ್ಷತೆ ದೃಷ್ಟಿಯಿಂದ ಇಂದು ೭ ತಾಲೂಕುಗಳ ಶಾಲಾ ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಕಾರವಾರ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ, ದಾಂಡೇಲಿ ಹಾಗೂ ಜೊಯಿಡಾ ತಾಲೂಕುಗಳ ಪ್ರಾಥಮಿಕ, ಪ್ರೌಢಶಾಲೆ, ಪದವಿಪೂರ್ವ ಕಾಲೇಜು, ಐಟಿಐ ಹಾಗೂ ಡಿಪ್ಲೊಮಾ ಕಾಲೇಜುಗಳಿಗೆ ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯ ರಜೆ ಘೋಷಿಸಿದ್ದಾರೆ.

**<><*<><>*><>**

ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಕೃಷಿ, ಕಂದಾಯ ಹಾಗೂ ಅರಣ್ಯ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿಯೂ ಆಗಿರುವ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ರೈತರಿಗೆ ಬಿತ್ತನೆ ಬೀಜ ವಿತರರಿಸಿದರು. ಬಳಿಕ ಮಾತನಾಡಿದ ಸಚಿವರು, ಪ್ರತಿ ವರ್ಷವೂ ಸಹ ರೈತರಿಗೆ ಬಿತ್ತನೆ ಬೀಜ ವಿತರಿಸುವ ಕೆಲಸವನ್ನು ಮಾಡಲಾಗುತ್ತಿದೆ. ಕಡಿಮೆ ಇಳುವರಿ ಹೊಂದಿರುವ ಪ್ರದೇಶದಲ್ಲಿ ಸುಮಾರು ೪ ಸಾವಿರ ರೈತರನ್ನು ಆಯ್ಕೆ ಮಾಡಿದ್ದು, ಅವರನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ಜಮೀನಿಗೆ ೬ ಸಾವಿರ ರೂಪಾಯಿ ಪ್ರೋತ್ಸಾಹ ಹಣವನ್ನು ನೀಡಲಾಗುತ್ತಿದೆ. ಅದರಲ್ಲಿ ನಾಲ್ಕುವರೆ ಸಾವಿರ ಪರಿಕರ ಹಾಗೂ ಒಂದುವರೆ ಸಾವಿರರೂಪಾಯಿ ಹಣವನ್ನು ನೇರವಾಗಿ ರೈತರ ಖಾತೆಗೆ ಜಮೆಯಾಗುತ್ತಿದೆ ಎಂದು ಚಲುವರಾಯಸ್ವಾಮಿ ವಿವರಿಸಿದರು. ಸರ್ಕಾರದ ಯೋಜನೆಗಳನ್ನು ರೈತರು ಸದುಪಯೋಗ ಪಡಿಸಿಕೊಳ್ಳುವಂತೆ ಸಚಿವರು ಈ ಸಂದರ್ಭದಲ್ಲಿ ಕರೆ ನೀಡಿದರು.

<><*<><>*><>

ಕೇಂದ್ರ ಸಚಿವರಾದ ಎಚ್.ಡಿ.ಕುಮಾರಸ್ವಾಮಿ, ಪ್ರಹ್ಲಾದ್ ಜೋಶಿ, ವಿ.ಸೋಮಣ್ಣ ಸೇರಿದಂತೆ ರಾಜ್ಯದ ಸಂಸದರಿಗೆ ದೆಹಲಿ ಕರ್ನಾಟಕ ಸಂಘದ ವತಿಯಿಂದ ದೆಹಲಿಯಲ್ಲಿ ಅಭಿನಂದಿಸಲಾಯಿತು. ನಂತರ ಕುಮಾರಸ್ವಾಮಿ ಮಾತನಾಡಿ, ಉತ್ತರ ಪ್ರದೇಶದ ನೋಯ್ಡಾದಲ್ಲಿ ದೆಹಲಿ ಕರ್ನಾಟಕ ಸಂಘಕ್ಕೆ ನಿವೇಶನ ಕಲ್ಪಿಸುವ ಬಗ್ಗೆ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರ ಜತೆ ಚರ್ಚೆ ಮಾಡಲಾಗುವುದು ಎಂದು ಭರವಸೆ ನೀಡಿದರು. ನಾವು ಎಲ್ಲೇ ಇದ್ದರೂ ನಮ್ಮ ಭಾಷೆ, ಸಂಸ್ಕೃತಿ, ನಾಡು ನುಡಿಯನ್ನು ಬಿಟ್ಟು ಬದುಕಬಾರದು. ಈ ನಿಟ್ಟಿನಲ್ಲಿ ದೆಹಲಿ ಕನ್ನಡಿಗರ ಬದ್ಧತೆ, ಕನ್ನಡತನದ ಬಗ್ಗೆ ತಮಗೆ ಸಂತಸವಿದೆ ಎಂದು ಹೇಳಿದರು.

<><*<><>*><>

ಕಲ್ಯಾಣ ಕರ್ನಾಟಕ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಐದು ಸಾವಿರ ಕೋಟಿ ರೂಪಾಯಿ ಅನುದಾನ ಕಲ್ಪಿಸಿದ್ದು, ಈ ಪೈಕಿ ಶೇಕಡ ೨೫ ರಷ್ಟು ಅನುದಾನವನ್ನು ಶೈಕ್ಷಣಿಕ ಅಭಿವೃದ್ಧಿಗೆ ಮೀಸಲಿಡಲಾಗಿದೆ ಎಂದು ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಡಾ.ಅಜಯ್ ಸಿಂಗ್ ಹೇಳಿದ್ದಾರೆ. ಬಳ್ಳಾರಿ ಜಿಲ್ಲೆಯ ತೋರಣಗಲ್‌ನಲ್ಲಿ ಶಾಲಾ ಶಿಕ್ಷಣ ಇಲಾಖೆ ಹಾಗೂ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ವತಿಯಿಂದ ಸರ್ಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟ ಸುಧಾರಣೆ ಕುರಿತು ಆಯೋಜಿಸಿರುವ ಎರಡು ದಿನಗಳ ಶೈಕ್ಷಣಿಕ ಸಮಾವೇಶಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು. ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಗೊಳಿಸುವ ಬಗ್ಗೆ ಈಗಾಗಲೇ ಕ್ರಮ ಕೈಗೊಂಡಿದ್ದು, ಜಿಲ್ಲೆಗಳ ಹಲವು ಶಾಲೆಗಳಲ್ಲಿ ಎಲ್.ಕೆ.ಜಿ, ಯುಕೆಜಿ ತರಗತಿಗಳನ್ನು ಪ್ರಾರಂಭಿಸಲಾಗಿದೆ, ಇಂಗ್ಲಿಷ್ ಕಲಿಕೆಗೆ ಹೆಚ್ಚಿನ ಒತ್ತು ನೀಡುವ ಉದ್ದೇಶದಿಂದ ದ್ವಿಭಾಷಾ ಶಿಕ್ಷಣ ವ್ಯವಸ್ಥೆಯನ್ನು ಸಹ ಕಲ್ಪಿಸಲಾಗಿದೆ ಎಂದು ತಿಳಿಸಿದರು.

<><*<><>*><>

ಜುಲೈ ತಿಂಗಳಲ್ಲಿ ನೈಋತ್ಯ ರೈಲ್ವೆ ವಿಭಾಗ ಆದಾಯದಲ್ಲಿ ಗಮನಾರ್ಹ ಹೆಚ್ಚಳ ಸಾಧಿಸಿದೆ. ಕಳೆದ ವರ್ಷದ ಇದೇ ಅವಧಿಗೆ ಹೋಲಿಸಿದರೆ ವಿವಿಧ ವಿಭಾಗಗಳಲ್ಲಿ ಗಣನೀಯ ಬೆಳವಣಿಗೆ ಕಂಡಿದೆ ಎಂದು ನೈಋತ್ಯ ರೈಲ್ವೆ ವಲಯದ ಪ್ರಧಾನ ವ್ಯವಸ್ಥಾಪಕ ಅರವಿಂದ್ ಶ್ರೀವಾಸ್ತವ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಜುಲೈ ತಿಂಗಳಲ್ಲಿ ಪ್ರಯಾಣಿಕರಿಂದ ೨೮೬ ಕೋಟಿ ೨೮ ಲಕ್ಷ ರೂಪಾಯಿ ಆದಾಯ ಬಂದಿದ್ದು, ಕಳೆದ ವರ್ಷದ ಜುಲೈ ತಿಂಗಳಿಗೆ ಹೋಲಿಸಿದರೆ, ೨೦ ಕೋಟಿ ರೂಪಾಯಿ ಅದಾಯ ಹೆಚ್ಚಳವಾಗಿದೆ ಎಂದು ಅಂಕಿ-ಅಂಶ ನೀಡಿದ್ದಾರೆ. ಸರಕು ಸೇವೆಗಳ ವಿಭಾಗ ಗಮನಾರ್ಹ ಏರಿಕೆ ಕಂಡಿದ್ದು, ಆದಾಯ ೧೨ ಕೋಟಿ ೮೩ ಲಕ್ಷ ರೂಪಾಯಿಗಳಿಂದ ೧೪ ಕೋಟಿ ೧೯ ಲಕ್ಷ ರೂಪಾಯಿಗೆ ಹೆಚ್ಚಳಗೊಂಡಿದೆ. ಸಂಚರಿಸಿದ ಪ್ರಯಾಣಿಕರ ಸಂಖ್ಯೆ ೧೩ ದಶಲಕ್ಷದಿಂದ ಪರಿಣಾಮಕಾರಿ ಟಿಕೆಟ್ ತಪಾಸಣಾ ಪ್ರಯತ್ನಗಳ ಪರಿಣಾಮವಾಗಿ ೨ ಕೋಟಿ ೩೬ ಲಕ್ಷ ರೂಪಾಯಿಗಳ ಹೆಚ್ಚುವರಿ ಆದಾಯ ಗಳಿಸಿದೆ. ಸರಕು ಸಾಗಣೆ ಆದಾಯ ೩೨೯ ಕೋಟಿ ೬೮ ಲಕ್ಷ ರೂಪಾಯಿಗಳಾಗಿದ್ದು, ಇದು ನೈಋತ್ಯ ರೈಲ್ವೆಯ ಒಟ್ಟಾರೆ ಆದಾಯಕ್ಕೆ ಗಮನಾರ್ಹ ಕೊಡುಗೆ ನೀಡಿದೆ ಎಂದು ವಿವರಿಸಿದ್ದಾರೆ. ಈ ಸಾಧನೆಯಲ್ಲಿ ಭಾಗಿಯಾಗಿರುವ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರನ್ನು ಅರವಿಂದ್ ಶ್ರೀವಾಸ್ತವ ಶ್ಲಾಘಿಸಿದ್ದಾರೆ.

<><*<><>*><>

ಜಲಜೀವನ್ ಮಿಷನ್ ಯೋಜನೆಯಡಿ ಕಾಮಗಾರಿ ಸಂಪೂರ್ಣಗೊಂಡಿರುವ ಗ್ರಾಮಗಳಿಗೆ ನೀರು ಪೂರೈಕೆಗೆ ಕ್ರಮ ಕೈಗೊಳ್ಳುವಂತೆ ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ದಾವಣಗೆರೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಶಾಸಕರು, ಕ್ಷೇತ್ರದಲ್ಲಿ ವಿವಿಧ ಇಲಾಖೆಗಳಿಂದ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳನ್ನು ಪೂರ್ಣಗೊಳಿಸದೆ, ಬಾಕಿ ಉಳಿಸಿಕೊಳ್ಳಲಾಗಿದ್ದು, ಕುಡಿಯುವ ನೀರು, ಚರಂಡಿ, ಶಾಲಾ ಕಟ್ಟಡ, ರಸ್ತೆ, ಅಂಗನವಾಡಿ ಸೇರಿದಂತೆ ಅಗತ್ಯದ ಕಾಮಗಾರಿಗಳನ್ನು ಕಾಲಮಿತಿಯಲ್ಲಿ ಪೂರ್ಣಗೊಳಿಸಿ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ತಾಕೀತು ಮಾಡಿದರು. ಶುದ್ಧ ಕುಡಿಯುವ ನೀರಿನ ಘಟಕಗಳ ನಿರ್ವಹಣೆ, ಮನ್ರೇಗಾ ಯೋಜನೆಯಡಿ ಶಾಲೆಯಲ್ಲಿ ಮಕ್ಕಳ ಭೋಜನಾಲಯ ಮತ್ತು ನೀರು ನಿರ್ವಹಣಾ ಕಾಮಗಾರಿಗಳನ್ನು ಪೂರ್ಣಗೊಳಿಸಲು ಸಂಬಂಧಿಸಿದ ಇಂಜಿನಿಯರ್‌ಗೆ ಶಾಸಕರು ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಇಟ್ನಾಳ್, ಉಪ ಕಾರ್ಯದರ್ಶಿ ಕೃಷ್ಣನಾಯ್ಕ ಉಪಸ್ಥಿತರಿದ್ದರು.

**<><*<><>*><>**

ಕೇರಳದ ವಯನಡಿನಲ್ಲಿ ಸಂಭವಿಸಿರುವ ಭೂಕುಸಿತದಿಂದ ಸಂತ್ರಸ್ತರ ನೆರವಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ-ಬಿಬಿಎಂಪಿ ಇಂದು ೨ ಟ್ರಕ್‌ನಲ್ಲಿ ಪರಿಹಾರ ಸಾಮಗ್ರಿಗಳನ್ನು ಕಳಿಸಿದೆ. ಸಂಕಷ್ಟದಲ್ಲಿರುವ ವಯನಾಡು ಸಂತ್ರಸ್ತರಿಗೆ ನೆರವಾಗಲೆಂದು ಪಾಲಿಕೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ೨೫ ಲಕ್ಷ ರೂಪಾಯಿ ನೆರವು ನೀಡಿದ್ದಾರೆ. ಅಕ್ಕಿ, ಗೋಧಿ, ಸಕ್ಕರೆ, ಅಡುಗೆ ಎಣ್ಣೆ ಸೇರಿದಂತೆ ಇತರೆ ಅಗತ್ಯ ವಸ್ತುಗಳು ಪರಿಹಾರ ಸಾಮಗ್ರಿಗಳಲ್ಲಿ ಸೇರಿವೆ. ಪರಿಹಾರ ಕಾರ್ಯಗಳ ಮೇಲುಸುವಾರಿಗಾಗಿ ಕಾರ್ಮಿಕ ಸಚಿವ ಸಂತೋಷ್ ಲಾಡ್ ಹಾಗೂ ಇಬ್ಬರು ಐಎಎಸ್ ಅಧಿಕಾರಿಗಳನ್ನು ಕರ್ನಾಟಕ ಸರ್ಕಾರ ನಿಯೋಜಿಸಿದೆ.

**<><*<><>*><>**

ಪ್ಯಾರಿಸ್‌ನಲ್ಲಿ ಒಲಿಂಪಿಕ್ಸ್‌ನಲ್ಲಿ, ಭಾರತದ ಲಕ್ಷ್ಯ ಸೇನ್ ಇಂದು ಸಂಜೆ ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್‌ನ ಕ್ವಾರ್ಟರ್-ಫೈನಲ್ ಪಂದ್ಯದಲ್ಲಿ ಚೈನೀಸ್ ತೈಪೆಯ ಚೌ ಟಿಯೆನ್ ಚೆನ್ ಅವರನ್ನು ಎದುರಿಸಲಿದ್ದಾರೆ. ಸೇನ್ ಪ್ರಸ್ತುತ ಒಲಿಂಪಿಕ್ಸ್‌ನಲ್ಲಿ ಉಳಿದಿರುವ ಏಕೈಕ ಭಾರತೀಯ ಬ್ಯಾಡ್ಮಿಂಟನ್ ಆಟಗಾರರಾಗಿದ್ದಾರೆ. ಮತ್ತೊಂದೆಡೆ, ಈ ಒಲಿಂಪಿಕ್ಸ್‌ನಲ್ಲಿ ಎರಡು ಬಾರಿ ಕಂಚಿನ ಪದಕ ವಿಜೇತೆ ಮನು ಭಾಕರ್, ಮಹಿಳೆಯರ ೨೫ ಮೀಟರ್ ಶೂಟಿಂಗ್ ಅರ್ಹತಾ ಸುತ್ತಿನಲ್ಲಿ ಇಂದು ಕಣಕ್ಕಿಳಿದಿದ್ದಾರೆ. ಅವರೊಂದಿಗೆ ಭಾರತದ ಈಶಾ ಸಿಂಗ್ ಕೂಡ ಸ್ಪರ್ಧಿಸುತ್ತಿದ್ದಾರೆ. ಪುರುಷರ ಹಾಕಿಯಲ್ಲಿ, ಈಗಾಗಲೇ ಕ್ವಾರ್ಟರ್‌ಫೈನಲ್‌ಗೆ ಅರ್ಹತೆ ಪಡೆದಿರುವ ಟೀಮ್ ಇಂಡಿಯಾ ಇಂದು ಸಂಜೆ ಆಸ್ಟ್ರೇಲಿಯಾವನ್ನು ಎದುರಿಸಲಿದೆ. ಜೂಡೋದಲ್ಲಿ ಮಹಿಳೆಯರ ಪ್ಲಸ್ ೭೮ ಕೆಜಿಯ ೩೨ನೇ ಸುತ್ತಿನ ಪಂದ್ಯದಲ್ಲಿ ಭಾರತದ ತುಲಿಕಾ ಮಾನ್ ಕ್ಯೂಬಾದ ಇಡಾಲಿಸ್ ಒರ್ಟಿಜ್ ಅವರನ್ನು ಎದುರಿಸಲಿದ್ದಾರೆ. ಫೈನಲ್ ಸೇರಿದಂತೆ ಮಹಿಳೆಯರ ಪ್ಲಸ್ ೭೮ ಕಿಲೋಗ್ರಾಂ ವಿಭಾಗದ ಎಲ್ಲಾ ಪಂದ್ಯಗಳು ಇಂದು ನಡೆಯಲಿವೆ. ಬಿಲ್ಲುಗಾರಿಕೆ ಮಿಶ್ರ ವಿಭಾಗದಲ್ಲಿ, ಭಾರತದ ಜೋಡಿ ಧೀರಜ್ ಬೊಮ್ಮದೇವರ ಮತ್ತು ಅಂಕಿತಾ ಭಕತ್ ಇಂಡೋನೇಷ್ಯಾದ ದಯಾನಂದ ಚೊಯಿರುನಿಸಾ ಮತ್ತು ಆರಿಫ್ ಪಂಗೆಸ್ತು ವಿರುದ್ಧ ೧೬ನೇ ಸುತ್ತಿನ ಪಂದ್ಯದಲ್ಲಿ ೫-೧ ಮೂಲಕ ಜಯ ಸಾಧಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದು, ಸಂಜೆ ಪಂದ್ಯ ನಡೆಯಲಿದೆ. ಪುರುಷರ ಶಾಟ್‌ಪುಟ್ ಅರ್ಹತಾ ಸುತ್ತಿನಲ್ಲಿ ತಜಿಂದರ್‌ಪಾಲ್ ಸಿಂಗ್ ತೂರ್ ಇಂದು ಸ್ಪರ್ಧಿಸಲಿದ್ದಾರೆ. ಭಾರತೀಯ ಗಾಲ್ಫ್ ಆಟಗಾರರಾದ ಗಗನ್ಜೀತ್ ಭುಲ್ಲರ್ ಮತ್ತು ಶುಭಂಕರ್ ಶರ್ಮಾ ಮತ್ತು ಸೇಲಿಂಗ್ ಸ್ಪರ್ಧೆಯಲ್ಲಿ ನೇತ್ರಾ ಕುಮನನ್ ಮತ್ತು ವಿಷ್ಣು ಸರವಣನ್ ಭಾಗವಹಿಸಲಿದ್ದಾರೆ

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <><*<>**